# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 857 (910) |
| ಸದಸ್ಯರ ಹೆಸರು | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.03.2025 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ಮೂಲ ದೇವಸ್ಥಾನಕ್ಕೆ ಭಕ್ತರು ಅತಿ ಹೆಚ್ಚಿನ ಜನಸಂಖ್ಯೆಯಲ್ಲಿ ಆಗಮಿಸುವ ರಸ್ತೆ ಮಾರ್ಗವು ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ, |
| ಆ. | ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು) | ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ಮೂಲ ಸ್ಥಾನ ದೇವಸ್ಥಾನಕ್ಕೆ ಪ್ರತಿ ನಿತ್ಯ ಆಗಮಿಸುವ ಸಾವಿರಾರು ಭಕ್ತರು ಸಂಚರಿಸುವ ರಸ್ತೆಯು ಸುಮಾರು 1.00 ಕಿ.ಮೀ ಉದ್ದ ಹಾಗೂ 10.00 ಮೀ ಅಗಲವಿದ್ದು, ಹಾಲಿ ರಸ್ತೆಯ ಆಯ್ದ ಭಾಗಗಳಲ್ಲಿ ಸುಮಾರು 7.00 ಮೀ ರಷ್ಟು ಉದ್ದ ಹಾಳಾಗಿದ್ದು, ಸದರಿ ಹಾಳಾದ ರಸ್ತೆಯನ್ನು ಅಭಿವೃದ್ಧಿಪಡಿಸಲು ಅಂದಾಜು ಮೊತ್ತ ರೂ.125.00 ಲಕ್ಷಗಳ ಅವಶ್ಯಕತೆ ಇರುತ್ತದೆ.<br><br>ಸದರಿ ರಸ್ತೆ ಕಾಮಗಾರಿಯನ್ನು ಅನುದಾನದ ಲಭ್ಯತೆಯನ್ನಾಧರಿಸಿ ಅಭಿವೃದ್ಧಿಪಡಿಸಲು ಕ್ರಮವಹಿಸಬೇಕಿದೆ. |
| ಇ. | ಯಾವ ಕಾಲಮಿತಿಯೊಳಗೆ ಹೊಸ ರಸ್ತೆಯನ್ನು ನಿರ್ಮಿಸಲಾಗುವುದು; (ಸಂಪೂರ್ಣ ವಿವರ ನೀಡುವುದು) | |
| ಈ. | ಸದರಿ, ದೇವಸ್ಥಾನದ ಆವರಣದಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ, |
| ಉ. | ಬಂದಿದ್ದಲ್ಲಿ, ದಿನ ನಿತ್ಯ ಆಗಮಿಸುತ್ತಿರುವ ಸಾವಿರಾರು ಭಕ್ತರಿಗೆ ಅನುಕೂಲವಾಗುವಂತೆ ಯಾವ ಕಾಲಮಿತಿಯಲ್ಲಿ ಶುದ್ಧ ನೀರಿನ ಘಟಕವನ್ನು ಸ್ಥಾಪಿಸಲಾಗುವುದು? (ವಿವರ ನೀಡುವುದು) | ಸದರಿ ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಈಗಾಗಲೇ ಕುಡಿಯುವ ನೀರಿನ ಸಲುವಾಗಿ 03 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಅವುಗಳಲ್ಲಿ 02 ಘಟಕ ಕಾರ್ಯ ನಿರ್ವಹಿಸುತ್ತಿರುವುದಿಲ್ಲ ಮತ್ತು 01 ಘಟಕವು ನಿಷ್ಕ್ರಿಯಗೊಂಡಿದ್ದು, ನಿಷ್ಕ್ರಿಯಗೊಂಡಿರುವ ಘಟಕವನ್ನು ಚಾಲನೆ ಮಾಡಿ, ಉಳಿದ 02 ಘಟಕಗಳನ್ನು ದುರಸ್ಥಿಗೊಳಿಸಿ ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಕ್ರಮವಹಿಸಬೇಕಿದೆ. |

ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಕವಿಪ/910/155ನೇ/ಅ/ಪ್ರ.ಸಂ.857(910)/2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು